ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

## ಕೊರೋನಾ: ಇಂದಿನಿಂದ ವಿಧಾನಸಭೆ ಗ್ಯಾಲರಿಗೆ ಪ್ರೇಕ್ಷಕರ ನಿರ್ಬಂಧ

ವಿಧಾನಸಭೆ: ಕೊರೊನಾ ವೈರಸ್ ವಿಶ್ವವ್ಯಾಪಿ ಮರಣ ಮೃದಂಗ ಬಾರಿಸುತ್ತಿರುವ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ವಿಧಾನಸಭೆಯ ಪ್ರೇಕ್ಷಕರ ಗ್ಯಾಲರಿಗೆ ಸಾರ್ವಜನಿಕರನ್ನು ಮಂಗಳವಾರದಿಂದ ನಾಲ್ಕು ದಿನಗಳ ಕಾಲ ನಿರ್ಬಂಧಿಸಲಾಗಿದೆ. ಸೋಮವಾರ ಸದನದಲ್ಲಿ ಈ ವಿಷಯ ಪ್ರಸ್ತಾಪಿಸಿದ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ಕೊರೋನಾ ವೈರಸ್ ಎಲ್ಲೆಡೆ ಪಸರಿಸುತ್ತಿರುವ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಮಂಗಳವಾರದಿಂದ ಪ್ರೇಕ್ಷಕರ ಗ್ಯಾಲರಿಗೆ ಸಾರ್ವಜನಿಕರನ್ನು ನಿಷೇಧಿಸಲಾಗಿದೆ. ಮಾ.20ರ ವರೆಗೆ ಸಾರ್ವಜನಿಕರಿಗೆ ಸದನದ ವೀಕ್ಷಣೆಗೆ ಅವಕಾಶ ಇಲ್ಲ. ಶಾಸಕರು ಜನರಿಗೆ ಶಿಫಾರಸು ಪತ್ರಗಳನ್ನು ನೀಡಬಾರದು ಮತ್ತು ಸ್ವಯಂಪ್ರೇರಣೆಯಿಂದ ಆಗಮಿಸುವ ಜನತೆಗೆ ಸಿಬ್ಬಂದಿ ವರ್ಗವು ವೀಕ್ಷಣೆಯ ಪಾಸ್ ವಿತರಣೆ ಮಾಡಬಾರದು ಎಂದರು.